ಉಪ ಕೇಂದ್ರದ ಅವಶ್ಯಕತೆ ಇಲ್ಲವೆಂದು ತೀರ್ಮಾನಿಸಲಾಗಿದೆ ಅಲ್ಲದೇ, ಸಜ್ಜೆಹೊಸಹಳ್ಳಿಗೆ 3 ಕಿ ಮೀ ದೂರವಿರುವ ಪುಲಮಘಟ್ಟದಲ್ಲಿ 66/11 ಕೆ ವಿ ವಿದ್ಯುತ್ ಉಪ ಕೇಂದ್ರ ಮಂಜೂರಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿದ್ದು, 2007–08 ನೇ ಸಾಲಿನಲ್ಲಿ ಪೂರ್ಣಗೊಳ್ಳುವ ನಿರೀಕ್ಷೆ ಇದೆ

ಸದರಿ ವಿಧಾನ ಸಭಾ ಕ್ಷೇತ್ರದಲ್ಲಿ ಬರುವ ಮಧುಗಿರಿ ತಾಲ್ಲೂಕಿನ ಕವಣದಾಲ ಗ್ರಾಮದಲ್ಲಿ ವಿದ್ಯುತ್ ಉಪಕೇಂದ್ರ ಸ್ಥಾಪನೆಯ ಪ್ರಸ್ತಾವನೆಯು ಸದ್ಯದಲ್ಲಿ ಇರುವುದಿಲ್ಲ

ಆ) ಗೊಲ್ಲಹಳ್ಳಿ(ಬೆಳಧರ) ಗ್ರಾಮದಲ್ಲಿ ಸ್ಥಾಪಿಸಲು ಉದ್ದೇಶಿಸಿರುವ 66/11 ಕೆ ವಿ ಉಪ ಕೇಂದ್ರದ ಕಾಮಗಾರಿಯನ್ನು 2007–08 ರ ಸಾಲಿನಲ್ಲಿ ಪ್ರಾರಂಭಿಸಲಾಗುವುದು

1463 (1662) ಶ್ರೀ ಕ್ಯಾತಸಂದ್ರ ಎನ್ ರಾಜಣ್ಣ (ಬೆಳ್ಳಾವಿ) – ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯ ಮಧುಗಿರಿ ಏಕಶಿಲ ಬೆಟ್ಟ, ಪ್ರಾಚೀನ ಈಜುಕೊಳ, ಚನ್ನರಾಯನ ದುರ್ಗದ ಕೋಟೆ, ಬೂದಗವಿಯ ಸಿದ್ಧರ ಬೆಟ್ಟಗಳ ಅಭಿವೃದ್ಧಿಗೆ ತೆಗೆದುಕೊಂಡಿರುವ ವಿಶೇಷ ಕಾರ್ಯಕ್ರಮಗಳಾವುವು,

ಆ) ಇದಕ್ಕಾಗಿ ಒದಗಿಸಿರುವ ಅನುದಾನವೆಷ್ಟು, ಹಾಗೂ ಖರ್ಚು ಮಾಡಿದ ಹಣ ಎಷ್ಟು?

ಶ್ರೀ ಬಿ ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು)

ಅ) ಮಧುಗಿರಿ ಹಾಗೂ ಚನ್ನರಾಯನದುರ್ಗಗಳಲ್ಲಿ ಯಾವುದೇ ವಿಶೇಷ ಯೋಜನೆಗಳನ್ನು ಇಲಾಖೆ ಕೈಗೆತ್ತಿಕೊಂಡಿರುವುದಿಲ್ಲ ಆದರೆ ಸಿದ್ಧರಬೆಟ್ಟದಲ್ಲಿ ಪ್ರವಾಸಿ ಸೌಲಭ್ಯ ನಿರ್ಮಿಸಲು ಯೋಜನೆಗಳನ್ನು ರೂಪಿಸಲಾಗಿದೆ ಸಿದ್ಧರಬೆಟ್ಟದಲ್ಲಿ ಈಗಾಗಲೇ ರೂ 12 00 ಲಕ್ಷಗಳ ವೆಚ್ಚದಲ್ಲಿ ಒಂದು ಶೌಚಾಲಯ ಮತ್ತು

ಕುಡಿಯುವ ನೀರಿನ ಸೌಲಭ್ಯವನ್ನು ನಿರ್ಮಿಸುವ ಕಾಮಗಾರಿಯನ್ನು ಕೈಗೆತ್ತಿಕೊಂಡಿದ್ದು, ಕಾಮಗಾರಿಯು ಪ್ರಗತಿಯಲ್ಲಿದೆ ಅಲ್ಲದೆ ಈ ಬೆಟ್ಟಕ್ಕೆ ಮೆಟ್ಟಿಲುಗಳ ನಿರ್ಮಾಣ, ಅವುಗಳಿಗೆ ರೈಲಿಂಗ್ ಅಳವಡಿಕೆ ಹಾಗೂ ಡಾರ್ಮೆಟರಿ ಬ್ಲಾಕ್ ನಿರ್ಮಾಣ ಮಾಡಲು ಕ್ರಮ ಜರುಗಿಸುತ್ತಿದ್ದು, ಸೂಕ್ತ ನಿವೇಶನ ಒದಗಿಸುವಂತೆ ಕೋರಿ ತುಮಕೂರಿನ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ

ಆ) 12 ನೇ ಹಣಕಾಸಿನ ಆಯೋಗದ ಯೋಜನೆಯ ಅಡಿಯಲ್ಲಿ ಸಿದ್ಧರಬೆಟ್ಟದ ಅಭಿವೃದ್ಧಿಗಾಗಿ ರೂ 40 000 ಲಕ್ಷಗಳನ್ನು ಮಂಜೂರು ಮಾಡಲಾಗಿದೆ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ಚಾಲನೆಯಲ್ಲಿದ್ದು ಪ್ರಸ್ತುತ ಯಾವುದೇ ವೆಚ್ಚ ಆಗಿರುವುದಿಲ್ಲ

1464 (1663) ಶ್ರೀ ಕ್ಯಾತಸಂದ್ರ ಎನ್ ರಾಜಣ್ಣ (ಬೆಳ್ಳಾವಿ) – ಮಾನ್ಯ ಯುವಜನಸೇವಾ ಹಾಗೂ ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ಬೆಳ್ಳಾವಿ ವಿಧಾನಸಭಾ ಕ್ಷೇತ್ರದ, ಬೆಳ್ಳಾವಿ, ಚೇಳೂರು, ತೊವಿನಕೆರೆ, ದೊಡ್ಡೇರಿ, ಕೊರಾ ಈ ಹೋಬಳಿ ಕೇಂದ್ರಗಳಲ್ಲಿ ಮಿನಿ ಕ್ರೀಡಾಂಗಣ ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು,

ಆ) ಇವುಗಳಿಗೆ ಅನುದಾನವನ್ನು ಒದಗಿಸಲಾಗಿದೆಯೇ,

ಇ) ಹಾಗಿದ್ದಲ್ಲಿ ಎಷ್ಟು ಅನುದಾನವನ್ನು ಒದಗಿಸಲಾಗಿದೆ,

ಈ) ಯಾವಾಗ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು?

ಶ್ರೀ ಹನುಮಂತಪ್ಪ ವೈ ಆಲ್ಕೋಡ್ (ಯುವಜನಸೇವಾ ಹಾಗೂ ಕ್ರೀಡಾ ಸಚಿವರು)

ಅ) ಪ್ರಸ್ತುತ ಸರ್ಕಾರವು ಜಿಲ್ಲಾ ಮಟ್ಟದಲ್ಲಿ ಹಾಗೂ ತಾಲ್ಲೂಕು ಮಟ್ಟಗಳಲ್ಲಿ ಕ್ರೀಡಾಂಗಣವನ್ನು ನಿರ್ಮಿಸುವ ಯೋಜನೆಯನ್ನು ಆದ್ಯತೆ ಮೇಲೆ ಕೈಗೆತ್ತಿಕೊಂಡಿದೆ